# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ರಾಜಕುಮಾರ ಪತ್ತಾರ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಶಹಾಪುರ ಯಾದಗಿರಿ ಜಿಲ್ಲೆ ಹಾಗೂ ಇನ್ನಿತರರ ವಿರುದ್ಧ ಶಿಸ್ತು ಕ್ರಮ - ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ-1ರವರಿಗೆ ವಹಿಸುವ ಬಗ್ಗೆ - ಆದೇಶ.

ಓದಲಾಗಿದೆ:-1. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. Compt / Uplok / GLB-1230 / 2013 /DRE-3 ದಿನಾಂಕ. 04.05.2018.

2. ಮಾನ್ಯ ಉಪಲೋಕಾಯುಕ್ತ-1 ರವರ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ ಸಲ್ಲಿಸಿರುವ ವರದಿ ಸಂಖ್ಯೆ Compt / Uplok / GLB-1230 / 2013 /DRE-3 ದಿನಾಂಕ. 26.04.2018.

*****

ಪ್ರಸ್ತಾವನೆ:-

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 04.05.2018ರ ಪತ್ರದ ಜೊತೆ ಮಾನ್ಯ ಉಪಲೋಕಾಯುಕ್ತ-1ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪಲೋಕಾಯುಕ್ತ-1 ರವರ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತ-1ರವರು ಲೋಕಾಯುಕ್ತ ಕಾಯ್ದೆ ಕಲಂ 12(3)ರಂತೆ ಸಲ್ಲಿಸಿರುವ ವರದಿ ಹಾಗೂ ಲಗತ್ತಿಸಿರುವ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿದೆ. ಶ್ರೀ ಚಂದ್ರಪ್ಪ ಬಿನ್ ಬಸಪ್ಪ ಕಟ್ಟಿಮನಿ ರವರು ಲೋಕಾಯುಕ್ತ ಕಚೇರಿಗೆ ಸಲ್ಲಿಸಿರುವ ದೂರಿನಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಶಹಾಪುರ ಇಲ್ಲಿನ ಕಿರಿಯ ಇಂಜಿನಿಯರ್‌ರಾದ ಶ್ರೀ ರಾಜಕುಮಾರ್ ಫತ್ತಾರ ಇವರು 2010-11ನೇ ಸಾಲಿನಲ್ಲಿ ಮೂಲಭೂತ ಸೌಲಭ್ಯ ಕಾಮಗಾರಿಗಳಿಗೆ ಬಿಡುಗಡೆಯಾದ ರೂ. 4.00 ಲಕ್ಷಗಳ ಅನುದಾನದಲ್ಲಿ ಯಾದಗಿರಿ ಜಿಲ್ಲೆಯ ಶಹಾಪೂರ ತಾಲ್ಲೂಕಿನ ಗೂಗಿ (ಕೆ)ಗ್ರಾಮದ ಪರಿಶಿಷ್ಟ ಜಾತಿಯವರ ಓಣಿಯಲ್ಲಿ ಚರಂಡಿ ನಿರ್ಮಾಣ ಕಾಮಗಾರಿಯನ್ನು ಕಳಪೆ ಮತ್ತು ಅಪೂರ್ಣಗೊಳಿಸಿ ಪೂರ್ತಿ ಹಣ ಪಾವತಿಸಿರುತ್ತಾರೆಂದು ಆಪಾದಿಸಿ ಸದರಿಯವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಕೋರಿರುತ್ತಾರೆ.

ಸದರಿ ದೂರಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ಸ್ಥಳ ಪರಿಶೀಲನೆ ನಡೆಸಿ ಸಲ್ಲಿಸಿದ ದಿನಾಂಕ: 19.02.2018ರ ತನಿಖಾ ವರದಿಯಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಶಹಾಪುರ ಇಲ್ಲಿ ಪ್ರಶ್ನಿತ ಕಾಮಗಾರಿಯನ್ನು ಅಳತೆ ಪುಸ್ತಕದಲ್ಲಿ ದಾಖಲಿಸಿರುವಂತೆ ಪೂರ್ಣ 80 ಮೀ ಉದ್ದಕ್ಕೆ ಕಾಂಕ್ರೀಟ್ ಚರಂಡಿಯನ್ನು ನಿರ್ಮಿಸದೇ 71.4 ಮೀ ಉದ್ದಕ್ಕೆ ಮಾತ್ರ ಕಾಂಕ್ರೀಟ್ ಚರಂಡಿಯನ್ನು

ನಿರ್ಮಿಸಿ, ಪೂರ್ಣ 80 ಮೀ ಉದ್ದಕ್ಕೆ ಬಿಲ್ ಮಾಡಿರುವ ಒಟ್ಟು ಮೊತ್ತ ರೂ. 3888597.00 ಈ ಪೈಕಿ ಅಳತೆ ಪುಸ್ತಕದಲ್ಲಿ ನಮೂದಿಸಿರುವ ಹೆಚ್ಚುವರಿ ಉದ್ದ 8.6 ಮೀಟರ್ ಅಳತೆಗೆ ಬಿಲ್ ಮಾಡಿ ಗುತ್ತಿಗೆದಾರರಿಗೆ ರೂ. 41774.00ಗಳನ್ನು ಹೆಚ್ಚುವರಿಯಾಗಿ ಪಾವತಿಸಲಾಗಿದೆ. ಈ ಲೋಪಕ್ಕೆ ಅಳತೆ ಪುಸ್ತಕದಲ್ಲಿ ಕಾಮಗಾರಿ ಅಳತೆಗಳನ್ನು ದಾಖಲಿಸಿರುವ, ಕಾಮಗಾರಿ ಚೆಕ್ ಮೇಸರ್‌ಮೆಂಟ್ ಮಾಡಿರುವ ಹಾಗೂ ಬಿಲ್ ಪಾವತಿಸಿರು ಕೆಳಕಂಡ ಅಧಿಕಾರಿಗಳು ಹೊಣೆ/ಜವಾಬ್ದಾರರಾಗಿರುತ್ತಾರೆಂದು ತಿಳಿಸಿರುತ್ತಾರೆ :-

1. ಶ್ರೀ ರಾಜಕುಮಾರ ಪತ್ತಾರ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಶಹಾಪೂರ
2. ಶ್ರೀ ಬಸವರಾಜ.ಸಿ.ತೋಟಗಂಟಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಶಹಾಪೂರ (ಹಾಲಿ ದಿನಾಂಕ : 31.05.2016ರಂದು ನಿವೃತ್ತಿ ಹೊಂದಿರುತ್ತಾರೆ).
3. ಶ್ರೀ ಚನ್ನಬಸಪ್ಪ ಮೆಕಾಲೆ, ಅಂದಿನ ಕಾರ್ಯಪಾಲಕ ಇಂಜಿನಿಯರ್(ಪ್ರಭಾರ), ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಯಾದಗಿರಿ (ಹಾಲಿ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ ಉಪ ವಿಭಾಗ, ಶಹಾಪೂರ.)

ಈ ಸಂಬಂಧ ಮಾನ್ಯ ಉಪಲೋಕಾಯುಕ್ತರು-1 ಇವರು ಈ ಮೇಲಿನ ಆಪಾದಿತ ಅಧಿಕಾರಿ / ನೌಕರರಿಗೆ ತನಿಖಾ ವರದಿಯ ಪ್ರತಿಯನ್ನು ಕಳುಹಿಸಿ, ಅವರಿಂದ ಈ ಬಗ್ಗೆ ಉತ್ತರ / ಆಕ್ಷೇಪಣೆ ಸಲ್ಲಿಸುವಂತೆ ತಿಳಿಸಿದ್ದಕ್ಕೆ ಪ್ರತಿಯಾಗಿ ಆಪಾದಿತ ಅಧಿಕಾರಿ / ನೌಕರರು ಸಲ್ಲಿಸಿದ ಆಕ್ಷೇಪಣೆಯಲ್ಲಿ ಸದರಿ ವರದಿಯನ್ನು ಅಲ್ಲಗಳೆಯಲು ಯಾವುದೇ ಆಧಾರಗಳು ಕಂಡು ಬರುತ್ತಿಲ್ಲವೆಂದು, ಈ ಅಂಶವನ್ನು ಗಣನೆಗೆ ತೆಗೆದುಕೊಂಡಾಗ ಸದರಿ ಅಧಿಕಾರಿ / ನೌಕರರು ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ನಿಷ್ಠೆಯನ್ನು ತೋರದೆ, ಕರ್ತವ್ಯ ಲೋಪವೆಸಗಿ, ದುರ್ವರ್ತನೆ ತೋರಿಸಿ, ಸಾರ್ವಜನಿಕ / ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಶಿಸ್ತುಕ್ರಮಕ್ಕೆ ಗುರಿಯಾಗಿರುತ್ತಾರೆಂದು, ಹಾಗಾಗಿ ಸದರಿ ಆಪಾದಿತ ಅಧಿಕಾರಿ / ನೌಕರರ ವಿರುದ್ಧ ಶಿಸ್ತು ನಡವಳಿಕೆ ಹೂಡಲು ಮಾನ್ಯ ಉಪಲೋಕಾಯುಕ್ತರು-1 ಇವರು ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ಕಲಂ 12(3)ರ ವರದಿಯಲ್ಲಿ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಮಾನ್ಯ ಉಪಲೋಕಾಯುಕ್ತರು-1 ಇವರು ಸಲ್ಲಿಸಿದ ವರದಿ ಹಾಗೂ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿದೆ. ಪ್ರಶ್ನಿತ ಕಾಮಗಾರಿಯಾದ ಯಾದಗಿರಿ ಜಿಲ್ಲೆಯ ಶಹಾಪೂರ ತಾಲ್ಲೂಕಿನ ಗೂಗಿ (ಕೆ)ಗ್ರಾಮದ ಪರಿಶಿಷ್ಟ ಜಾತಿಯವರ ಓಣಿಯಲ್ಲಿ ಚರಂಡಿ ನಿರ್ಮಾಣ ಕಾಮಗಾರಿಯನ್ನು ವಾಸ್ತವ ನಿರ್ವಹಣೆಗಿಂತ ಅಳತೆ ಪುಸ್ತಕದಲ್ಲಿ ಹೆಚ್ಚುವರಿಯಾಗಿ ವಿವರಗಳನ್ನು ನಮೂದಿಸುವ ಮೂಲಕ ರೂ. 41,774/-ಗಳ ಹೆಚ್ಚುವರಿ ಮೊತ್ತವನ್ನು ಪಾವತಿಸಿರುವುದು ಸ್ಪಷ್ಟವಾಗಿರುತ್ತದೆ. ಈ ಲೋಪಕ್ಕೆ ಪ್ರಕರಣದಲ್ಲಿ ಭಾಗಿಯಾಗಿರುವ ಮೇಲಿನ ಮೂರು ಜನ ಅಧಿಕಾರಿಗಳ ಕರ್ತವ್ಯ ನಿರ್ವಹಣೆಯಲ್ಲಿ ಪೂರ್ಣ ಪ್ರಮಾಣದ ಕರ್ತವ್ಯ ನಿಷ್ಠೆ ಹಾಗೂ ಪ್ರಾಮಾಣಿಕತೆ ಪ್ರದರ್ಶಿಸದೆ ದುರ್ನಡತೆ ಮತ್ತು ಬೇಜವಾಬ್ದಾರಿತನ ತೋರಿರುವುದು ಸ್ಪಷ್ಟವಾಗಿರುತ್ತದೆ.

ಹಾಗಾಗಿ ಪ್ರಕರಣದಲ್ಲಿ ಭಾಗಿಯಾಗಿರುವ ಮೇಲಿನ ಮೂರು ಜನ ನೌಕರರು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1)ನ್ನು ಉಲ್ಲಂಘನೆ ಮಾಡಿರುವುದು ಮೇಲ್ನೋಟಕ್ಕೆ ಸ್ಪಷ್ಟವಾಗಿರುತ್ತದೆ.

ಆದ್ದರಿಂದ, ಪ್ರಕರಣದಲ್ಲಿ ಭಾಗಿಯಾಗಿರುವ ಆಪಾದಿತರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳ ನಿಯಮ 11ರಂತೆ ವಿವರವಾದ ಇಲಾಖಾ ವಿಚಾರಣೆ ನಡೆಸುವ ಸಲುವಾಗಿ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ-1ರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ

**ಆದೇಶ ಸಂಖ್ಯೆ : ಗ್ರಾಅಪ 50 ಇಎನ್‌ಕ್ಯೂ 2018 ಬೆಂಗಳೂರು, ದಿನಾಂಕ. 09 .07.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಈ ಕೆಳಕಂಡ ಅಧಿಕಾರಿಗಳ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ನಡೆಸಲು ಸದರ ನಿಯಮಗಳ ನಿಯಮ 14(ಎ)ರ ಅನುಸಾರ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ-1ರವರಿಗೆ ವಹಿಸಿ ಆದೇಶಿಸಿದೆ:-

1. ಶ್ರೀ ರಾಜಕುಮಾರ್ ಪತ್ತಾರ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಶಹಾಪುರ

2. ಶ್ರೀ ಚನ್ನಬಸಪ್ಪ ಮೆಕಾಲೆ, ಹಿಂದಿನ ಕಾರ್ಯಪಾಲಕ ಇಂಜಿನಿಯರ್(ಪ್ರಭಾರ), ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಯಾದಗಿರಿ ಹಾಲಿ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ ಉಪ-ವಿಭಾಗ, ಶಹಾಪೂರ

ಪ್ರಕರಣದಲ್ಲಿ ಭಾಗಿಯಾಗಿರುವ ಮತ್ತೊಬ್ಬ ಆಪಾದಿತ ಅಧಿಕಾರಿಯಾದ ಶ್ರೀ ಬಸವರಾಜ.ಸಿ.ತೋಟಗಂಟಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಶಹಾಪೂರ ಇವರು ಸೇವೆಯಿಂದ ದಿನಾಂಕ : 31.05.2016ರಂದು ನಿವೃತ್ತಿ ಹೊಂದಿರುವುದರಿಂದ, ಸದರಿಯವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214 (2)(ಬಿ) ರಡಿ ಅನುಮತಿ ನೀಡಿ ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14(ಎ)ರ ಅನುಸಾರ ಮಾನ್ಯ ಉಪಲೋಕಾಯುಕ್ತ-1ರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

09/07/2018

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.

2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ.
4. ಉಪ ನಿಬಂಧಕರು ವಿಚಾರಣೆಗಳು–3, ವಿಚಾರಣೆಗಳು–3, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಯಾದಗಿರಿ.
8. ಸಂಬಂಧಪಟ್ಟ ಆಪಾದಿತ ಅಧಿಕಾರಿ / ನೌಕರರಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಯಾದಗಿರಿ ಇವರ ಮುಖಾಂತರ.
9. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ : ಆಪ್ತ ಕಾರ್ಯದರ್ಶಿಯವರಿಗೆ.
10. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
11. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಕಂಪ್ಯೂಟರ್ ಸೆಲ್.